**Akashvani : Bangalore**
**Regional Bulletin In Kannada**
**02.05.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.05.2026 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ರಾಜ್ಯ ಸರ್ಕಾರಕ್ಕೆ ಮೂರು ವರ್ಷ ; ಇದೇ ೧೦ರಂದು ತುಮಕೂರಿನಲ್ಲಿ ಬೃಹತ್ ಸಮಾವೇಶ ಆಯೋಜನೆ - ಗೃಹ ಸಚಿವ ಡಾ.ಜಿ.ಪರಮೇಶ್ವರ್**

**೨. ಕೇಂದ್ರ ಸಚಿವ ಡಾ.ಮನ್ಸುಖ್ ಮಾಂಡವಿಯ ಅವರಿಂದ ನಾಳೆ ದೊಡ್ಡಬಳ್ಳಾಪುರದಲ್ಲಿ ಇಎಸ್‌ಐಸಿ ಆಸ್ಪತ್ರೆ ಉದ್ಘಾಟನೆ**

**೩. ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಕುಸಿತ ; ಜನರ ಸಂಕಷ್ಟಕ್ಕೆ ಸ್ಪಂದಿಸದ ಸರ್ಕಾರ - ಬಿ.ವೈ.ವಿಜಯೇಂದ್ರ ಆರೋಪ**

**೪. ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಗೆ ತೆರೆ ; ಫೈನಲ್‌ನಲ್ಲಿ ಕುಲ್ಲೇಟೀರ ಕುಟುಂಬ ತಂಡಕ್ಕೆ ಜಯ**

**<><*<><>*><>**

ರಾಜ್ಯ ಸರ್ಕಾರಕ್ಕೆ ಮೂರು ವರ್ಷಗಳು ತುಂಬುತ್ತಿರುವ ಹಿನ್ನೆಲೆಯಲ್ಲಿ ಇದೇ ೧೦ರಂದು ತುಮಕೂರಿನಲ್ಲಿ ಬೃಹತ್ ಸಮಾವೇಶ ಆಯೋಜಿಸಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಮಾವೇಶ ಆಯೋಜಿಸಲಾಗುತ್ತಿದ್ದು, ರಾಜ್ಯಾದ್ಯಂತ ೨ ಲಕ್ಷಕ್ಕೂ ಅಧಿಕ ಫಲಾನುಭವಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದರು. ಸಮಾವೇಶದಲ್ಲಿ ರಾಜ್ಯ ಸರ್ಕಾರದ ಅಭೂತಪೂರ್ವ ಯಶಸ್ವಿ ಯೋಜನೆಗಳ ಅನುಷ್ಠಾನ ಮತ್ತಿತರ ಇಲಾಖೆಗಳ ಪ್ರಗತಿ ದರ್ಶನ ಕುರಿತ ವಸ್ತುಪ್ರದರ್ಶನ ನಡೆಯಲಿದೆ. ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತು ವಿತರಿಸಲಾಗುವುದು ಎಂದು ಮಾಹಿತಿ ನೀಡಿದರು.

**<><*<><>*><>**

ಕೇಂದ್ರ ಕಾರ್ಮಿಕ, ಉದ್ಯೋಗ ಹಾಗೂ ಯುವಜನ ವ್ಯವಹಾರಗಳ ಸಚಿವ ಡಾ.ಮನ್ಸುಖ್ ಮಾಂಡವೀಯಾ ನಾಳೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರಕ್ಕೆ ಭೇಟಿ

ನೀಡಲಿದ್ದು, ನೂತನ ಇಎಸ್‌ಐಸಿ ಆಸ್ಪತ್ರೆ ಉದ್ಘಾಟಿಸಲಿದ್ದಾರೆ. ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ೧೦೦ ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ನಿರ್ಮಾಣವಾಗಿದ್ದು, ಕೇಂದ್ರ ಸಚಿವರು ಇದನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಸಂಸದ ಡಾ.ಕೆ.ಸುಧಾಕರ್, ಶಾಸಕ ಧೀರಜ್ ಮುನಿರಾಜು, ಮತ್ತಿತರ ಗಣ್ಯರು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಕುಸಿದಿದ್ದು, ಸರ್ಕಾರ ಜನರ ಸಂಕಷ್ಟಕ್ಕೆ ಸ್ಪಂದಿಸುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮೈಸೂರಿನಲ್ಲಿಂದು ಆರೋಪಿಸಿದರು. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಬೆಂಬಲಿಗರು ದೆಹಲಿಯಲ್ಲಿ ಬೀಡು ಬಿಟ್ಟು ಅಧಿಕಾರಕ್ಕಾಗಿ ಹಂಬಲಿಸುತ್ತಿದ್ದಾರೆ. ಆದರೆ ರಾಜ್ಯದ ಜನತೆಯ ನೆರವಿಗೆ ಧಾವಿಸುತ್ತಿಲ್ಲ ಎಂದು ದೂರಿದರು.

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳಾಗಿಲ್ಲ, ವ್ಯಾಪಕ ಭ್ರಷ್ಟಾಚಾರಗಳಿಂದ ಅಧಿಕಾರಿಗಳ ಮೇಲೆ ಸರ್ಕಾರ ನಿಯಂತ್ರಣ ಇಲ್ಲದಂತಾಗಿದೆ ಎಂದರು. ಇದೇ ೯ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಮಾಜಿ ಮುಖ್ಯಮಂತ್ರಿ. ಬಿ.ಎಸ್.ಯಡಿಯೂರಪ್ಪ ಅವರ ೫೦ ವರ್ಷದ ಸಾರ್ವಜನಿಕ ಜೀವನದ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಸಿದ್ಧತೆಗಳು ನಡೆಯುತ್ತಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

<><*<><>*><>

ಯುವ ಜನತೆಯ ಆಶೋತ್ತರ ಈಡೇರಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಿದ್ದು, ಎಲ್ಲಾ ರೀತಿಯ ನೆರವು ಒದಗಿಸುತ್ತಿದೆ ಎಂದು ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯ ವಿಶ್ವ ವಿದ್ಯಾಲಯದ ನೂತನ ಮುಖ್ಯ ಪ್ರವೇಶದ್ವಾರ ಉದ್ಘಾಟನೆ ಹಾಗೂ ಮಂಡ್ಯ ಯುವ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಯುವ ಜನತೆ ಶಿಕ್ಷಣವನ್ನು ಗಂಭೀರವಾಗಿ ಪರಿಗಣಿಸಿ, ಮುನ್ನಡೆದರೆ  ಸಮಾಜದಲ್ಲಿ ಉತ್ತಮ ಪ್ರಜೆಯಾಗಬಹುದು ಎಂದರು. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಮಂಡ್ಯ ಜಿಲ್ಲೆ ರಾಜ್ಯದಲ್ಲೇ ೫ನೇ ಸ್ಥಾನವನ್ನು ಪಡೆಯುವ ಮೂಲಕ ಗುಣಮಟ್ಟದ ಸಾಧನೆಯನ್ನು ಮಾಡಿದೆ ಇದಕ್ಕೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಶ್ರಮ ದೊಡ್ಡದು ಎಂದರು. ಶಾಸಕ ಪಿ.ರವಿಕುಮಾರ್ ಗಣಿಗ ಮಾತನಾಡಿ, ರಾಜ್ಯದಲ್ಲಿ ಎಲ್ಲೂ ಇರದ ಆಪಲ್ ಲ್ಯಾಬ್ ಮಂಡ್ಯ ವಿಶ್ವವಿದ್ಯಾಲಯದಲ್ಲಿರುವುದು ಹೆಮ್ಮೆಯ ಸಂಗತಿ. ಶೀಘ್ರದಲ್ಲೇ ಸುಸಜ್ಜಿತ ಕ್ರೀಡಾಂಗಣ ಹಾಗೂ ಉತ್ತಮ ಕ್ಯಾಂಟೀನ್ ಹಾಗೂ ಬ್ಯಾಸ್ಕೆಟ್ ಬಾಲ್ ಕ್ರೀಡಾಂಗಣ ನಿರ್ಮಾಣ ಮಾಡಲಾಗುವುದು ಎಂದರು.

<><*<><>*><>

ಗದಗ ಜಿಲ್ಲೆಯ ಲಕ್ಕುಂಡಿಯಲ್ಲಿರುವ ವಿಶ್ವ ವಿಖ್ಯಾತ ದೇವಸ್ಥಾನಗಳು, ಕಲ್ಯಾಣಿಗಳು ಮತ್ತು ಭಾವಿಗಳ ಪುನರುಜ್ಜೀವನಗೊಳಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಪ್ರಾಚ್ಯ ಅವಶೇಷಗಳ ಅನ್ವೇಷಣೆಯ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಲಕ್ಕುಂಡಿಯ ಶಿಲ್ಪ ಕಲಾಕೃತಿಗಳ ವೈಭವವನ್ನು ಜಗತ್ತಿಗೆ ಪರಿಚಯಿಸುವ ಉದ್ದೇಶದಿಂದ ಲಕ್ಕುಂಡಿ ಗ್ರಾಮದಲ್ಲಿರುವ ದೇವಾಲಯಗಳ, ಕಲ್ಯಾಣಿಗಳು ಮತ್ತು ಭಾವಿಗಳ ಅಭಿವೃದ್ಧಿಯನ್ನು ರಾಜ್ಯ ಸರ್ಕಾರ ಕೈಗೊಂಡು ಅದಕ್ಕೆ ಸೂಕ್ತ ಅನುದಾನ ಬಿಡುಗಡೆ ಮಾಡಿದೆ ಎಂದರು. ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಸಿ.ಸಿ.ಪಾಟೀಲ್ ಸೇರಿದಂತೆ ಹಲವಾರು ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಕೊಡಗು ಜಿಲ್ಲೆಯ ನಾಪೋಕ್ಲು ಗ್ರಾಮದಲ್ಲಿ ಕಳೆದ ೧ ತಿಂಗಳಿನಿಂದ ನಡೆದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಯ ಫೈನಲ್ ಪಂದ್ಯಾಟದಲ್ಲಿ ಕುಲ್ಲೇಟೀರ ಕುಟುಂಬ ತಂಡವು ಜಯಗಳಿಸಿದೆ. ಇಂದು ನಡೆದ ರೋಚಕ ಫೈನಲ್ಸ್‌ನಲ್ಲಿ ಚೆಪ್ಪುಡೀರ ತಂಡವನ್ನು ೩-೧ ಗೋಲುಗಳ ಅಂತರದಿಂದ ಕುಲ್ಲೇಟಿರ ತಂಡವು ಮಣಿಸಿ ಚೇನಂಡ ಕಪ್ ಹಾಕಿ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು. ಫೈನಲ್ ಪಂದ್ಯಾಟವನ್ನು ಕೇಂದ್ರದ ಕ್ರೀಡಾ ಖಾತೆ ಸಚಿವ ಡಾ.ಮನ್ಸೂಖ್ ಮಾಂಡವಿಯಾ, ಸಂಸದ ಯದುವೀರ್ ಒಡೆಯರ್, ಶಾಸಕ ಎ.ಎಸ್. ಪೊನ್ನಣ್ಣ, ಕೊಡವ ಹಾಕಿ ಅಕಾಡೆಮಿಯ ಅಧ್ಯಕ್ಷ ಪಿ.ಕೆ. ಬೋಪಣ್ಣ ಸೇರಿದಂತೆ ಹಲವು ಗಣ್ಯರು ವೀಕ್ಷಿಸಿದರು. ಕೊಡವ ಸಮುದಾಯದಲ್ಲಿ ಹಾಕಿ ಕ್ರೀಡೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ೨೬ ವರ್ಷಗಳ ಹಿಂದೆ ಕರಡ ಗ್ರಾಮದಲ್ಲಿ ಪಾಂಡಂಡ ಕುಟ್ಟಪ್ಪ ಅವರ ವಿನೂತನ ಪರಿಕಲ್ಪನೆಯಾಗಿ ಜಾರಿಗೊಂಡ ಕುಟುಂಬಗಳ ನಡುವೇ ಹಾಕಿ ಪಂದ್ಯಾಟ ಇದೀಗ ಯಶಸ್ವಿ ೨೬ ನೇ ವರ್ಷವನ್ನು ಪೂರೈಸಿದೆ. ಈ ವರ್ಷ ದಾಖಲೆಯ ೩೮೩ ಕುಟುಂಬ ತಂಡಗಳ ೩ ಸಾವಿರದ ೬೦೦ ಆಟಗಾರರು ಪಂದ್ಯಾವಳಿಯಲ್ಲಿ ಪಾಲ್ಗೊಂಡಿದ್ದರು. ಮುಂದಿನ ವರ್ಷ ಅಜ್ಜಿಕುಟ್ಟೀರ ಕುಟುಂಬದವರು ಹಾಕಿ ಪಂದ್ಯಾಟವನ್ನು ಆಯೋಜಿಸಲಿದ್ದಾರೆ.

<><*<><>*><>

ದೇಶದ ಪ್ರಗತಿಯಲ್ಲಿ ಕಾರ್ಮಿಕರ ಕೊಡುಗೆ ಅಪಾರವಾಗಿದ್ದು, ಅವರ ಸುರಕ್ಷತೆ ಮತ್ತು ಕಲ್ಯಾಣಕ್ಕೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್ ಹೇಳಿದ್ದಾರೆ. ಯಾದಗಿರಿಯಲ್ಲಿಂದು ನೊಂದಾಯಿತ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಿಸಿ ಮಾತನಾಡಿದ ಅವರು, ಕಾರ್ಮಿಕ ಸಚಿವ ಸಂತೋಷ ಲಾಡ್ ಅವರ ನೇತೃತ್ವದಲ್ಲಿ ಇಲಾಖೆಯಲ್ಲಿ ಹಲವು ಸುಧಾರಣೆಗಳನ್ನು ತರಲಾಗಿದ್ದು, ಕಾರ್ಮಿಕರ ಅನುಕೂಲಕ್ಕಾಗಿ ಅನೇಕ ಯೋಜನೆಗಳನ್ನು

ಜಾರಿಗೆ ತರಲಾಗಿದೆ ಎಂದರು. ಜಿಲ್ಲೆಯ ಯುವ ಕಾರ್ಮಿಕರು ಉದ್ಯೋಗಕ್ಕಾಗಿ ನಗರಗಳಿಗೆ ವಲಸೆ ಹೋಗದೇ ಸ್ಥಳೀಯವಾಗಿ ಲಭ್ಯವಿರುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಬದುಕು ರೂಪಿಸಿಕೊಳ್ಳಬೇಕು ಎಂದು ತಿಳಿಸಿದರು.

<><*<><>*><>

ಬೇಸಿಗೆಯ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ತ್ರೈ ಮಾಸಿಕ  ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೨೮೯ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಗುರುತಿಸಲಾಗಿದ್ದು ೨೫೬ ಕಡೆ ಖಾಸಗಿ ಬೋರೆವೆಲ್ ಬಾಡಿಗೆ ಪಡೆದು ನೀರು ಸರಬರಾಜು ಮಾಡಲಾಗುತ್ತಿದೆ ಎಂದರು.  ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಸೂಕ್ತ ಕ್ರಮ ವಹಿಸಬೇಕು ಎಂದು ಸೂಚಿಸಿದರು.

<><*<><>*><>

ಪ್ರಯಾಣಿಕರ ಸಾಮರ್ಥ್ಯ ಮತ್ತು ಅನುಕೂಲತೆಯನ್ನು ಹೆಚ್ಚಿಸಲು ನೈಋುತ್ಯ ರೈಲ್ವೆಯು ಕೆಲವು ರೈಲುಗಳಿಗೆ ಹೆಚ್ಚುವರಿ ಬೋಗಿಗಳ ಸೇರ್ಪಡೆಗೆ ನಿರ್ಧರಿಸಿದೆ. ಪ್ರತಿ ರೈಲಿಗೂ ತಲಾ ಒಂದು ಎಸಿ-೩ ಟೈರ್ ಬೋಗಿ, ಮೂರು ಸ್ಲೀಪರ್ ಕ್ಲಾಸ್ ಬೋಗಿ, ಒಂದು ಸಾಮಾನ್ಯ ದರ್ಜೆಯ ಬೋಗಿಗಳನ್ನು ಸೇರಿಸಲಾಗುವುದು ಎಂದು ನೈಋುತ್ಯ ರೈಲ್ವೆ ಹೇಳಿಕೆಯಲ್ಲಿ ತಿಳಿಸಿದೆ. ಯಶವಂತಪುರ-ವಿಜಯಪುರ, ಯಶವಂತಪುರ ದೈನಂದಿನ ಎಕ್ಸ್‌ಪ್ರೆಸ್ ರೈಲುಗಳಿಗೆ ಐದು ಹೆಚ್ಚುವರಿ ಬೋಗಿಗಳನ್ನು ಸೇರ್ಪಡೆಗೊಳಿಸಲಾಗಿದೆ. ಇದರೊಂದಿಗೆ ಒಟ್ಟು ಬೋಗಿಗಳ ಸಂಖ್ಯೆ ೧೩ ರಿಂದ ೧೮ಕ್ಕೆ ಏರಿಕೆಯಾಗಿದೆ. ಈ ಪರಿಷ್ಕೃತ ಬದಲಾವಣೆ ಯಶವಂತಪುರದಿಂದ ಮೇ ೮ ಮತ್ತು ವಿಜಯಪುರದಿಂದ ಮೇ ೯ರಿಂದ ಜಾರಿಗೆ ಬರಲಿದೆ.  ಯಶವಂತಪುರ-ಹಿಂದೂಪುರ, ಯಶವಂತಪುರ ಕಾಯ್ದಿರಿಸದ ವಿಶೇಷ ಎಕ್ಸ್‌ಪ್ರೆಸ್ ರೈಲಿನ ಬೋಗಿಗಳ ಸಂಖ್ಯೆಯನ್ನು ಸಹ ೧೩ ರಿಂದ ೧೮ಕ್ಕೆ ಹೆಚ್ಚಿಸಲಾಗಿದೆ. ಪರಿಷ್ಕೃತ ಯೋಜನೆಯು ಇದೇ ೧೦ರಿಂದ ಯಶವಂತಪುರ ಮತ್ತು ಹಿಂದೂಪುರ ಎರಡೂ ಕಡೆಗಳಿಂದ ಜಾರಿಗೆ ಬರಲಿದೆ ಎಂದು ಪ್ರಕಟಣೆ ತಿಳಿಸಿದೆ.

<><*<><>*><>

ದಕ್ಷಿಣ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದ್ದು, ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನಲ್ಲಿ ಒಣಹವೆ ಇತ್ತು. ಮೈಸೂರು ಪಿಟಿಒನಲ್ಲಿ ೪, ನಾಗಮಂಗಲ ೩, ಬೆಂಗಳೂರು ನಗರ ಜಿಲ್ಲೆಯಲ್ಲಿ ೧ ಸೆಂಟಿ ಮೀಟರ್ ಮಳೆಯಾಗಿದೆ. ಬೀದರ್‌ನಲ್ಲಿ ಗರಿಷ್ಠ ೪೩.೮ ಡಿಗ್ರಿ ಸೆಲ್ಸಿಯೆಸ್

ತಾಪಮಾನ ದಾಖಲಾಗಿದೆ. ಕಳೆದ ೨೪ ಗಂಟೆಗಳಲ್ಲಿ ರಾಜ್ಯಾದ್ಯಂತ ಗರಿಷ್ಠ ತಾಪಮಾನದಲ್ಲಿ ದೊಡ್ಡ ಬದಲಾವಣೆ ಕಂಡು ಬಂದಿಲ್ಲ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**